## ಕರ್ನಾಟಕ ವಿಧಾನ ಪರಿಷತ್ತು

1. ಸದಸ್ಯರ ಹೆಸರು : ಶ್ರೀ. ಮುನಿರಾಜು ಗೌಡ ಎಂ.ಪಿ (ವಿಧಾನಸಭೆಯಿಂದ ಚುನಾಯಿತರಾದವರು)
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 228 (193)
3. ಉತ್ತರಿಸಬೇಕಾದ ದಿನಾಂಕ : 06-07-2023
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರಿ ನೌಕರರಿಗೆ ನಗದು ರಹಿತ ಆರೋಗ್ಯ ಸೇವೆಗೆ ನಿಯಮಾವಳಿಗಳನ್ನು ಜಾರಿ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಯಾವ ದಿನಾಂಕದಂದು ಜಾರಿ ಮಾಡಲಾಗಿದೆ: | ಕರ್ನಾಟಕ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ರಾಜ್ಯ ಸರ್ಕಾರವು ರೂಪಿಸಿರುವ ನಗದು ರಹಿತ "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)"ಯನ್ನು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963 ರ ಭಾಗವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಈ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ - ದಿನಾಂಕ:17.08.2021ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020 ರಿಂದ ಪ್ರಾರಂಭಿಸಿ ಹಂತಹಂತವಾಗಿ ನಿರ್ದೇಶನ/ ಮಾರ್ಗಸೂಚಿಗಳನ್ನು ಹೊರಡಿಸಲಾಗುತ್ತಿದೆ. |
| ಆ) | ನಗದು ರಹಿತ ಆರೋಗ್ಯ ಸೇವೆಯಿಂದ ರಾಜ್ಯದ ಎಷ್ಟು ಜನ ನೌಕರರಿಗೆ ಮತ್ತು ಅವರ ಅವಲಂಬಿತರಿಗೆ ಅನುಕೂಲವಾಗಲಿದೆ: | ನಗದು ರಹಿತ ಆರೋಗ್ಯ ಸೇವೆಯಿಂದ ರಾಜ್ಯದ ಅಂದಾಜು 5 ಲಕ್ಷಕ್ಕೂ ಹೆಚ್ಚಿನ ಸರ್ಕಾರಿ ನೌಕರರು ಮತ್ತು ಅವರ ಕುಟುಂಬ ಒಂದಕ್ಕೆ ಸರಾಸರಿ 5 ಸದಸ್ಯರಂತೆ ಸುಮಾರು 25ರಿಂದ 30ಲಕ್ಷ ಫಲಾನುಭವಿಗಳಿಗೆ ಅನುಕೂಲವಾಗಲಿದೆ ಎಂದು ಅಂದಾಜು ಮಾಡಲಾಗಿದೆ. |

..2

| | | |
|---|---|---|
| ಇ) | ನಗದು ರಹಿತ ಆರೋಗ್ಯ ಸೇವೆಯನ್ನು ಜಾರಿಗೆ ತರಲು ಎಷ್ಟು ಆಸ್ಪತ್ರೆಗಳ ಜೊತೆ ಒಪ್ಪಂದ ಮಾಡಿಕೊಳ್ಳಲಾಗಿದೆ: | ದಿನಾಂಕ: 09.03.2023ರ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 16 ಎಸ್ಎಂಆರ್ 2020 (ಭಾ-5) ರಲ್ಲಿ 'ಈಗಾಗಲೇ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್(SAST) ನ ವಿವಿಧ ಯೋಜನೆಗಳಡಿಯಲ್ಲಿ ಮತ್ತು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು, 1963 ರಡಿ ನೊಂದಾಯಿತವಾಗಿರುವ (ಜ್ಯೋತಿ ಸಂಜೀವಿನಿ ಯೋಜನೆ ಸೇರಿದಂತೆ) ಖಾಸಗಿ ಆಸ್ಪತ್ರೆಗಳನ್ನು KASS ಯೋಜನೆಯಡಿ ಭಾವಿತ ನೋಂದಾವಣೆಗೆ (Deemed Empanelment) ಒಳಪಡಿಸಲು ಅನುಮತಿಸಲಾಗಿದೆ. ನಗದು ರಹಿತ ಆರೋಗ್ಯ ಸೇವೆಯನ್ನು ಜಾರಿಗೆ ತರಲು ಖಾಸಗಿ ಆಸ್ಪತ್ರೆಗಳ ಜೊತೆ ನೂತನವಾಗಿ ಒಪ್ಪಂದ ಮಾಡಿಕೊಳ್ಳುವ ಪ್ರಕ್ರಿಯೆಗೆ ಸಂಬಂಧಿಸಿದ ಕಾರ್ಯವು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್(SAST) ನಲ್ಲಿ ಪ್ರಗತಿಯಲ್ಲಿರುತ್ತದೆ. |
| ಈ) | ನಗದು ರಹಿತ ಆರೋಗ್ಯ ಸೇವೆಯನ್ನು ಯಾವ ಕಾಲಮಿತಿಯಲ್ಲಿ ಜಾರಿಗೆ ತರಲಾಗುವುದು? | "ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ (KASS)"ಯನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಲ್ಲಿ ಒಂದು ವಿಶೇಷ ಕೋಶವನ್ನು (KASS Cell) ಸೃಜಿಸಿದ್ದು, ಈ ಯೋಜನೆಯನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸುವ ಕಾರ್ಯ ಪ್ರಗತಿಯಲ್ಲಿದೆ. |

ಇ-ಕಡತ ಸಂಖ್ಯೆ: ಸಿಆಸುಇ 78 ಎಸ್ಎಂಆರ್ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ